## ದಿನಾಂಕ: 05/10/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-135 ಪಾದರಾಯನಪುರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ರವಿಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | BWSSB |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-135 | BESCOM |
| 3 | ಶ್ರೀ. ವೆಂಕಟರಾಮ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 4 | ಶ್ರೀ. ನಾಗರಾಜ | ಎ.ಎಸ್.ಐ, ಜೆಜೆಆರ್‌ನಗರ ಪೊಲೀಸ್ ಠಾಣೆ | ಆರೋಗ್ಯ ವೈದ್ಯಾಧಿಕಾರಿಗಳು |
| 5 | ಶ್ರೀ. ಭಾರ್ಗವ್.ಎಸ್ | ಮಾರ್ಷಲ್ | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ. ಅಫ್ಸರ್ ಪಾಷ | ವಾರ್ಡ್ ಸದಸ್ಯರು | |
| 7 | ಶ್ರೀ. ಅಫ್ರೋಜ್ ಖಾನ್ | ವಾರ್ಡ್ ಸದಸ್ಯರು | |
| 8 | ಶ್ರೀ. ಗುಲಾಬ್ | ವಾರ್ಡ್ ಸದಸ್ಯರು | |
| 9 | ಶ್ರೀ. ಪ್ರಕಾಶ್ | ವಾರ್ಡ್ ಸದಸ್ಯರು | |
| 10 | ಶ್ರೀ. ಬಾಲಾಜಿ.ಎಂ.ಎಸ್ | ವಾರ್ಡ್ ಸದಸ್ಯರು | |
| 11 | ಶ್ರೀ. ರಿಯಾಜ್ ಪಾಷ | ವಾರ್ಡ್ ಸದಸ್ಯರು | |
| 12 | ಶ್ರೀ. ಅಲ್ಲಾ ಬಕ್ಷು | ವಾರ್ಡ್ ಸದಸ್ಯರು | |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. **<u>ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:</u>**

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | BWSSB ಮತ್ತು BESCOM ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ | ಸಭೆಯಲ್ಲಿ ನೀರು ಮತ್ತು ಒಳಚರಂಡಿ ಹಾಗೂ ವಿದ್ಯುತ್‌ಗೆ ಸಂಬಂಧಪಟ್ಟಂತೆ ಹಲವಾರು ದೂರುಗಳು ಬರುತ್ತಿದ್ದು, ದೂರುಗಳನ್ನು ಅಹವಾಲಿಸಿ ಪರಿಹರಿಸಲು ಸಂಬಂದಪಟ್ಟ BWSSB ಮತ್ತು BESCOM ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ ಅಧ್ಯಕ್ಷರು ಗಮನಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |

...ಪ್ರ.ತಿ.ನೋ

Scanned by CamScanner

| | | | |
|---|---|---|---|
| 2 | ಘನತ್ಯಾಜ್ಯ ನಿರ್ವಹಣೆಯು SOP ಪಾಲಿಸದಿರುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯು ಕಾರ್ಯಾದೇಶದ ಕರಾರಿನನ್ವಯ SOP ಯನ್ನು ಪಾಲಿಸದೇ ಇರುವುದರಿಂದ ಘನತ್ಯಾಜ್ಯ ನಿರ್ವಹಣೆಯು ಸಮರ್ಪಕವಾಗಿ ನಿರ್ವಹಣೆಯಾಗದಿರುವ ಬಗ್ಗೆ ಸಭೆಯಲ್ಲಿ ದೂರು ಸಲ್ಲಿಸಿರುವ ಮೇರೆಗೆ ಸಂಬಂಧಪಟ್ಟ ಅಧಿಕಾರಿಯು ಪರಿಶೀಲಿಸಿ ಟೆಂಡರ್ ಕರಾರಿನಂತೆ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (SWM) |
| 3 | ಹೊಸಹಳ್ಳಿ ಮುಖ್ಯರಸ್ತೆಯ ಬ್ರಿಡ್ಜ್ ಮತ್ತು ಪೈಪ್‌ಲೈನ್ ರಸ್ತೆಯ ಬೀದಿದೀಪಗಳನ್ನು ಅಳವಡಿಸುವಂತೆ ಸಭೆಯಲ್ಲಿ ಕೋರಲಾಯಿತು. | ಸಭೆಯಲ್ಲಿ ಹೊಸಹಳ್ಳಿ ಮುಖ್ಯರಸ್ತೆ ಬ್ರಿಡ್ಜ್ ಹಾಗೂ ಪೈಪ್‌ಲೈನ್ ರಸ್ತೆಯು ವಾರ್ಡ್‌ನ ಪ್ರಮುಖ ರಸ್ತೆಯಾಗಿದ್ದು, ಈ ಸ್ಥಳಗಳಲ್ಲಿ ಬೀದಿದೀಪಗಳಿಲ್ಲದೆ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯೊಂಟಾಗುತ್ತಿದ್ದು ಹಾಗಿ ರಾತ್ರಿ ವೇಳೆಯಲ್ಲಿ ಈ ಪ್ರಸಾಪಿತ ಸ್ಥಳಗಳಲ್ಲಿ ಅಹಿತಕರ ಘಟನೆಗಳು ಸಂಭವವಿರುವುದರಿಂದ ಬೀದಿದೀಪಗಳನ್ನು ದುರಸ್ಥಿಪಡಿಸಲು ವಿದ್ಯುತ್ ವಿಭಾಗದವರಿಗೆ ಅಗತ್ಯ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು. | ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಕಿರಿಯ ಅಭಿಯಂತರರು (ವಿದ್ಯುತ್) |
| 4 | ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ವಾಣಿಜ್ಯ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ | ಈ ಬಗ್ಗೆ ಸಭೆಯಲ್ಲಿ ಅನಧೀಕೃತವಾಗಿ ವಾಣಿಜ್ಯ ಚಟುವಟಿಕೆಗಳು ಹೆಚ್ಚಾಗುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ವಾಣಿಜ್ಯ ಚಟುವಟಿಕೆಗಳಿಂದ ಉತ್ಪತ್ತಿಯಾಗುತ್ತಿರುವ ತ್ಯಾಜ್ಯ ಹೆಚ್ಚಾಗುತ್ತಿದ್ದು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿರುವುದರಿಂದ ವಾಣಿಜ್ಯ ಚಟುವಟಿಕೆಗಳಿಗೆ ಸಂಬಂಧಪಟ್ಟಂತೆ ಟ್ರೇಡರ್ಸ್ ಅಸೋಸಿಯೇಷನ್ ರವರೊಂದಿಗೆ ಸಭೆಯನ್ನು ನಿಗಧಿಪಡಿಸುವಂತೆ ಸೂಚಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿ (ಚಾಮರಾಜಪೇಟೆ ವಿಭಾಗ) |
| 5 | ಅರಫತ್‌ನಗರ ಮತ್ತು ನೆಹರು ರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದ ಹಾಗೂ BWSSB ಒಳಚರಂಡಿ ದುರಸ್ಥಿ ಕಾಮಗಾರಿಗಳಿಂದ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಇದನ್ನು ಮುಚ್ಚಲು ಅಗತ್ಯ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

Scanned by CamScanner

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 135 ಪಾದರಾಯನಪುರ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆಜೆಆರ್ ನಗರ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17. ವಾರ್ಡ್ ಸಂಖ್ಯೆ: 135 ಪಾದರಾಯನಪುರ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner